**<u>ಹೆಚ್ಚುವರಿ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ</u>**

**ಸಿಸಿ ನಂ. 999/2022**

| | | | |
|---|---|---|---|
| **ಹೆಸರು** | : | **ಕಾಶಿನಾಥ** | ಚಾ.ಸಾ.11 |
| **ತಂದೆಯ ಹೆಸರು** | : | **ಹಣಮಂತ** | ಪ್ರಾ.ಸಾ.5 |
| **ವಯಸ್ಸು** | : | **32 ವರ್ಷ** | ದಿನಾಂಕಃ 27-10-2025 |
| **ಉದ್ಯೋಗ** | : | **ಒಕ್ಕಲುತನ** | |
| **ವಾಸಸ್ಥಳ** | : | **ನಾವದಗಿ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ಪ್ರಾಸಾ-4 ರವರು ನನಗೆ ಗೊತ್ತು. ಈಗ ನೋಡುತ್ತಿರುವ ನಿಪಿ-15ರಲ್ಲಿರುವ ಸಹಿ ನನ್ನದೆ. ನನ್ನ ಸಹಿಯನ್ನು ನಿಪಿ-15(ಬಿ) ಎಂದು ಗುರುತಿಸಲಾಯಿತು.

ಈಗ 4-5 ವರ್ಷಗಳ ಹಿಂದೆ ಬೆಳಗ್ಗೆ 11 ರಿಂದ 12 ಗಂಟೆ ಸುಮಾರಿಗೆ ನಾವದಗಿ ಗೇಟ ಕ್ರಾಸ್ ಹತ್ತಿರ ನನ್ನ ಸಹಿಯನ್ನು ಪಡೆದುಕೊಂಡಿದ್ದಾರೆ. ಯಾವ ಕಾರಣಕ್ಕಾಗಿ ಸಹಿ ಮಾಡಿದ್ದೇನೆ ನನಗೆ ಗೊತ್ತಿಲ್ಲ. ಪೋಲಿಸರು ಸಹಿ ಮಾಡು ಎಂದು ಹೇಳಿದಕ್ಕೆ ಸಹಿ ಮಾಡಿದ್ದೇನೆ. ಪೋಲಿಸರು ನನ್ನ ಸಮಕ್ಷಮ ಯಾವುದೇ ವಸ್ತು ಜಪ್ತಿ ಮಾಡಿಕೊಂಡಿಲ್ಲ. ಈಗ ನೋಡುತ್ತಿರುವ ನಿಪಿ-16 ಮತ್ತು 17 ರ ಭಾವಚಿತ್ರಗಲ್ಲಿ ನಾನು ಇದ್ದೇನೆ. ನಿಪಿ-16 ಮತ್ತು 17 ರ ಭಾವಚಿತ್ರಗಳಲ್ಲಿ ನನ್ನ ಜೊತೆ ಪೋಲಿಸರು ಮತ್ತು ಪ್ರಾಸಾ-4ರವರು ಇದ್ದಾರೆ. ಇನ್ನುಳಿದ ಇಬ್ಬರು ವ್ಯಕ್ತಿಗಳು ಯಾರು ಎಂದು ನನಗೆ ಗೊತ್ತಿಲ್ಲ. ನಿಪಿ-16 ಮತ್ತು 17ರ ಭಾವಚಿತ್ರಗಳು ಯಾವ ಸ್ಥಳದಲ್ಲಿ ಪಡೆದುಕೊಂಡಿದ್ದಾರೆ ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ಪಂಚನಾಮೆಗೆ ಈ ಸಾಕ್ಷಿ ಭಾಗಶಃ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**<u>ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ದಿನಾಂಕ 22-02-2017 ರಂದು ಸಹಿ ಮಾಡಿದ್ದೇನೆ ಎಂದರೆ ಸರಿ. ಈಗ ನೋಡುತ್ತಿರುವ ನಿಪಿ-16 ಮತ್ತು 17ರ ಭಾವಚಿತ್ರದಲ್ಲಿ ನ್ಯಾಯಾಲಯದ ಮುಂದೆ ಇರುವ ಆರೋಪಿತರು ಇದ್ದಾರೆ ಎಂದರೆ ಸರಿ. ಈಗ ನೋಡುತ್ತಿರುವ ಬ್ಯಾಟರಿ ಸೆಲ್ಲುಗಳು ಸ್ಥಳದಲ್ಲ್ ಇದ್ದಿರುವ ಬಗ್ಗೆ ನನಗೆ ನೆನಪಿಲ್ಲ. ಈಗ ನೋಡುತ್ತಿರುವ ಬ್ಯಾಟರಿ ಸೆಲ್ಲಿನ ಮೇಲೆ ಇರುವ ಚೀಟಿಯಲ್ಲಿರುವ ಸಹಿ ನನ್ನದೆ. ಈಗ ನೋಡುತ್ತಿರುವ ಚೀಟಿ ಮೇಲಿರುವ ಸಹಿ

ಭಾವಚಿತ್ರವನ್ನು ಪಡೆದುಕೊಳ್ಳುವ ಸಮಯಕ್ಕ್ಷ ಮಾಡಿದ್ದೇನೆ ಎಂದರೆ ಸರಿ. ಬ್ಯಾಟರಿ ಸೇಲ್ಲುಗಳು ಕಳ್ಳತನ ಆಗಿರುವ ಬಗ್ಗೆ ಪೋಲಿಸರು ಪಂಚನಾಮೆ ಮಾಡಲು ಬಂದಿದ್ದರು ಎಂದರೆ ಸಾಕ್ಷಿ ಬ್ಯಾಟರಿ ಸೆಲ್ಲುಗಳು ಕಳ್ಳತನ ಆಗಿರುವ ಬಗ್ಗೆ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಪೋಲಿಸರು ಓದಿ ಹೇಳಿ ನನ್ನ ಸಹಿಯನ್ನು ಪಡೆದು ಕೊಂಡಿದ್ದಾರೆ ಎಂದರೆ ಸರಿಯಲ್ಲ. ಆರೋಪಿತರು ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**C/C ಹೆಚ್ಚುವರಿ ಪ್ರ.ದ.ನ್ಯಾ.ದಂ. ಚಿಂಚೋಳಿ**